ಮೈಸೂರ ಗೆಜೆಟ್ಟಿಂ.

ಸಂ. 39.] ಸರ್ಕಾರದಿಂದ ಪ್ರಾಯಿತ ಆದ್ದು. [ನಂ. 37.

ಬೆಂಗಳೂರು, ಗುರುವಾರ, ಸೆಪ್ಟೆಂಬರ್ ತಾ|| 15, ಸ|| 1904.

IIನೆ ಭಾಗ.

ಇಂಡ್ಯುಗೆವರ್ಡ್ ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ಗಳು ಮೆಗ್ಯೆಕೇರಿಂದ ಕೊಡೋಣಾದ ಇನ್ಸ್ಟ್ರಾರ್ನಾಮಿಗಳು.

ವಿದ್ಯಾಭ್ಯಾಸದ ಇಲಾಖೆ.

ಪ್ರಕಟನ ಪತ್ರಿಕೆ.

ಮೈಸೂರು ದೇಶೀಯ ಪರೀಕ್ಷೆಗಳು.

ಸ|| 1904ನೆ ಇಸವಿ ಸೆಪ್ಟಂಬರ್ ತಾರೀಖು 2ನೆ ಡಿ. ನಂಬರು 10.

ಮೈಸೂರು ದೇಶೀಯ ಪರೀಕ್ಷೆಗಳು ಸ|| 1904ನೆ ಇಸವಿ ನವಂಬರು ತಿಂಗಳು ಮಂಗಳವಾರ ಹದಿನೈದನೇ ತಾರೀಖಿನಿಂದ ಆರಂಭವಾಗಿ ಪ್ರತಿ ಡಿಸ್ಟ್ರಿಕ್ಟಿನ ಮುಖ್ಯಸ್ಥಳ (Head-quarters) ದಲ್ಲಿಯೂ ಮತ್ತು ಚಿಕ್ಕಬಳ್ಳಾಪುರದಲ್ಲಿಯೂ, ಚನ್ನಪಟ್ಟಣದಲ್ಲಿಯೂ ನಡೆಯಿಸಲ್ಪಡುವವು :—

ಪರೀಕ್ಷೆಗಳು ಇದರಲ್ಲೀ ಕಂಡ ಕಾಲ ಮತ್ತು ವಿಷಯಗಳ ಕ್ರಮಗಳನ್ನನುಸರಿಸಿ ನಡೆಯಿಸಲ್ಪಡುವವು :—

ಮೈಸೂರು ಲೋವರ್ ಸೆಕಂಡರಿ ಪರೀಕ್ಷೆ.

ದಿವಸ.	ಕಾಲ.	ವಿಷಯಗಳು.	ಅಂಕಗಳು.
ಮೊದಲನೇ ದಿವಸ	10ರಿಂದ 12—30 ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ— ಇಂಗ್ಲಿಷ್ ವ್ಯಾಕರಣ ಮತ್ತು ಭಾಷಾಗ್ರಂಥ.	60
		ಸಂಸ್ಕೃತ ಮತ್ತು ಫಾರಸಿಯ ವ್ಯಾಕರಣ ಮತ್ತು ಭಾಷಾ ಗ್ರಂಥಗಳು	65
	1—30ರಿಂದ 2—30ರ ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ— ಭಾಷಾಂತರೀಕರಣ—ಇಂಗ್ಲಿಷ್, ಸಂಸ್ಕೃತ, ಫಾರಸಿ	
		ಇಂಗ್ಲಿಷ್ ಪ್ರಬಂಧರಚನೆ, ಇಂಗ್ಲೀಷನ್ನು ದೇಶಭಾಷೆಯಾಗಿ ಉಳ್ಳವರಿಗೆ	35
	2—35ರಿಂದ 3—5 ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಉಕ್ತಲೇಖನ—ಇಂಗ್ಲೀಷ್	15
		ಸಂಸ್ಕೃತ ; ಫಾರಸಿ	10
	3—10ರಿಂದ 3—40 ವರೆಗೆ	ಪ್ರಥಮ ಅಥವಾ ಆವಶ್ಯಕ ಭಾಷೆ—	
		ಕೈಬರವಣಿಗೆ—ಇಂಗ್ಲೀಷ್ ; ಸಂಸ್ಕೃತ ; ಫಾರಸಿ	10
	3—45ರಿಂದ 4—15 ವರೆಗೆ	ಉರ್ದು ಉಕ್ತಲೇಖನ ...	10
	4—20ರಿಂದ 4—50 ವರೆಗೆ	ಉರ್ದು ಕೈಬರವಣಿಗೆ ...	10

ದಿವಸ.	ಕಾಲ.	ವಿಷಯಗಳು.	ಅಂಕಗಳು.
ಎರಡನೇ ದಿವಸ	10ರಿಂದ 1ರ ವರೆಗೆ	ಕನ್ನಡ ಪ್ರಥಮ ಅಥವಾ ದ್ವಿತೀಯ ಭಾಷೆ—	
		ಕನ್ನಡ ವ್ಯಾಕರಣ, ಭಾಷಾಗ್ರಂಥ ಮತ್ತು ಪ್ರಬಂಧರಚನೆ	100
		ಫಾರಸಿ ದ್ವಿತೀಯ ಭಾಷೆ —	
		ಫಾರಸಿ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ ...	100
		ಸಂಸ್ಕೃತ ದ್ವಿತೀಯ ಭಾಷೆ—	
		ಸಂಸ್ಕೃತ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ ..	100
		ಲಾರ್ಟ್ ದ್ವಿತೀಯ ಭಾಷೆ	
		ಲಾರ್ಟ್ ವ್ಯಾಕರಣ, ಭಾಷಾಗ್ರಂಥ ಮತ್ತು ಭಾಷಾಂತರೀಕರಣ .	120
	2ರಿಂದ 5ರ ವರೆಗೆ	ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ—	
		ತೆಲುಗು, ಮತ್ತು ಉರ್ದು, ವ್ಯಾಕರಣ, ಭಾಷಾಗ್ರಂಥಗಳು ಮತ್ತು ಪ್ರಬಂಧರಚನೆ	100
ಮೂರನೇ ದಿವಸ	10ರಿಂದ 12 ವರೆಗೆ	ಅಂಕಗಣಿತ	100
	12–5ರಿಂದ 12–35 ವರೆಗೆ	ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ —	
		ಕನ್ನಡ ಮತ್ತು ತೆಲುಗು ಅಕ್ಷರ ಸಂಯೋಜನ	10
	12–40ರಿಂದ 1–10ವರೆಗೆ	ದೇಶಭಾಷೆ ಪ್ರಥಮ ಅಥವಾ ದ್ವಿತೀಯ ಭಾಷೆ —	
		ಕನ್ನಡ ಮತ್ತು ತೆಲುಗು ಕೈ ಬರವಣಿಗೆ	10
	2ರಿಂದ 3–30ವರೆಗೆ	ಆರೋಗ್ಯ ಶಾಸ್ತ್ರ)	100
	3–45ರಿಂದ 4–15 ವರೆಗೆ	ಐಚ್ಛಿಕ ದ್ವಿತೀಯ ಭಾಷೆ —	
		ಸಂಸ್ಕೃತ ಮತ್ತು ಫಾರಸಿ ಅಕ್ಷರ ಸಂಯೋಜನ	10
	4–20ರಿಂದ 4–50 ವರೆಗೆ	ಐಚ್ಛಿಕ ದ್ವಿತೀಯ ಭಾಷೆ —	
		ಸಂಸ್ಕೃತ ಮತ್ತು ಫಾರಸಿ ಕೈ ಬರವಣಿಗೆ	10
ನಾಲ್ಕನೇ ದಿವಸ.	10ರಿಂದ 1ರ ವರೆಗೆ	ಚರಿತ್ರೆ, ಭೂಗೋಳಶಾಸ್ತ್ರ) ಮತ್ತು ಭೂಪಟ ಬರೆಯುವುದು	120
	2ರಿಂದ 3–35 ವರೆಗೆ	ವ್ಯವಸಾಯ ಶಾಸ್ತ್ರ)	100
ಐದನೇ ದಿವಸ ...	10ರಿಂದ 11–30 ವರೆಗೆ	ಕ್ಷೇತ್ರಗಣಿತ	100
	11–35ರಿಂದ 1–5 ವರೆಗೆ	ಪ್ರಾಕೃತಿಕ ಭೂಗೋಳ ಶಾಸ್ತ್ರ)	100
	2 ರಿಂದ 3—30 ವರೆಗೆ	ಹೂಲಿಗ	50
		ಅಂಗ್ಲೇಯರ ಚರಿತ್ರೆ	100
	3—35ರಿಂದ 5—5ವರೆಗೆ	ಪಾಕಶಾಸ್ತ್ರ)	50
		ಗೃಹಕೃತ್ಯ ನಡಯಿಸುವ ಕ್ರಮ	100

ಮೈಸೂರು ದೇಶಭಾಷೆಯ ಅಪ್ಪರ್ ಸೆಕಂಡರಿ ಪರೀಕ್ಷೆ.

ದಿನ.	ಘಂಟೆ.	ವಿಷಯಗಳು.	ಅಂಕಗಳು.
ಮೊದಲನೇ ದಿನ	10 - 1	ಪ್ರಥಮ ಭಾಷೆ — ಕನ್ನಡ ಅಥವಾ ಉರ್ದು ಗ್ರಂಥಗಳು	60
	2—4	ಅದೇ ಡಿಟೋ ಪ್ರಾಥವ್ಯಾಕರಣ	40 } 130
	4·5—5 5	ಅದೇ ಡಿಟೋ ಪ್ರಬಂಧರಚನೆ	30
ಎರಡನೇ ದಿನ ...	10—1	ಪ್ರಥಮ ಅಥವಾ ದ್ವಿತೀಯ ಭಾಷೆ — ಪರ್ಪಿಯರ್ ಗ್ರಂಥಗಳು	60
	2—4	ಡಿಟೋ ಡಿಟೋ ವ್ಯಾಕರಣ	40 } 130
	4·5—5·5	ಡಿಟೋ ಡಿಟೋ ಪರ್ಷಿಯರ್ ಭಾಷೆಗೆ ಭಾಷಾಂತರೀಕರಣ	30
ಮೂರನೇ ದಿನ...	10—1	ದ್ವಿತೀಯ ಭಾಷೆ — ಸಂಸ್ಕೃತ ಅಥವಾ ಅರಾಪಿಕ್, ಗ್ರಂಥಗಳು, ವ್ಯಾಕರಣ, ಪದವಿನ್ಯಾಸ, ಭಾಷಾ ಶೈಲಿ	60
	2—5	ಭಾಷಾಂತರೀಕರಣ ...	70 } 130

ದಿನ.	ಘಂಟೆ.	ವಿಷಯಗಳು.	ಅಂಕಗಳು.
ನಾಲ್ಕನೇ ದಿನ ...	10—12	ರೇಖಾಗಣಿತ, ಕ್ಷೇತ್ರಗಣಿತ	40
	1—3·30	ಅಂಕಗಣಿತ	50 } 120
	3·35—5·5	ಬೀಜಗಣಿತ	30
ಐದನೇ ದಿನ ...	10—12	ಪ್ರಾಕೃತಿಕ ಶಾಸ್ತ್ರ (Physical science)	40
	1—3	ಆರೋಗ್ಯಶಾಸ್ತ್ರ)	40 } 120
	3·5—5·5	ಕೃಷಿಶಾಸ್ತ್ರ)	40
ಆರನೇ ದಿನ ...	10—1	ಚರಿತ್ರೆ)	50 } 100
	2—5	ಭೂಗೋಳ ಶಾಸ್ತ್ರ)	50
			ಜುಮ್ಲಾ 600

ಪರೀಕ್ಷೆಯರಿಗೆ ಹೊಲಿಗೆಯಲ್ಲಿಯೂ ಸಂಗೀತದಲ್ಲಿಯೂ ಪರೀಕ್ಷೆಯು ಏಳನೇದಿನ ತತ್ಪೂರ್ವ ಪ್ರಕಟಿಸಲ್ಪಡುವ ಸ್ಥಳ, ಕಾಲಗಳಲ್ಲಿ ನಡೆಯುವುದು.

ಕರ್ನಾಟಕ ಪಂಡಿತ ಪರೀಕ್ಷೆ.

ದಿನ.	ಘಂಟೆ.	ವಿಷಯಗಳು.	ಅಂಕಗಳು.
ಮೊದಲನೇ ದಿನ ...	10—1	ಕನ್ನಡ ವ್ಯಾಕರಣ	120 } 200
	2—5	ಕನ್ನಡ ಛಂದಸ್ಸು ಮತ್ತು ಅಲಂಕಾರ ...	80
ಎರಡನೇ ದಿನ ..	10—1	ಕನ್ನಡ ಗ್ರಂಥಗಳು ಮೊದಲನೇ ಪತ್ರಿಕೆ ...	100 } 400
	2—5	ಅದೇ ಎರಡನೇ ಪತ್ರಿಕೆ	100
ಮೂರನೇ ದಿನ ...	10—1	ಅದೇ ಮೂರನೇ ಪತ್ರಿಕೆ	100
	2—5	ಅದೇ ನಾಲ್ಕನೇ ಪತ್ರಿಕೆ	100
ನಾಲ್ಕನೇ ದಿನ	10—1	ಕನ್ನಡ ಪ್ರಬಂಧರಚನೆ	100
	2—5	ಭಾಷಾಂತರೀಕರಣ	100
ಐದನೇ ದಿನ ...	10—1	ಸಂಸ್ಕೃತ ವ್ಯಾಕರಣ	100
	2—5	ಸಂಸ್ಕೃತ ಛಂದಸ್ಸು ಮತ್ತು ಅಲಂಕಾರ	80 } 200
ಆರನೇ ದಿನ ..	10—1	ಸಂಸ್ಕೃತ ಗ್ರಂಥಗಳು ಮೊದಲನೇ ಪತ್ರಿಕೆ	120
	2—5	ಅದೇ ಎರಡನೇ ಪತ್ರಿಕೆ	100 } 200

ಇದರಡಿ ಕಂಡ ನಿಬಂಧನೆಗಳಿಗೆ ವಿದ್ಯಾರ್ಥಿಗಳು ಮುಖ್ಯವಾಗಿ ಗಮನವನ್ನು ಕೊಡತಕ್ಕದ್ದು:—

(1) ಪರೀಕ್ಷೆಯು ಆರಂಭಿಸುವದಕ್ಕೆ ನಿಶ್ಚಿತವಾದ ಕಾಲ ಮೊದಲು ಅರ್ಧ ಘಂಟೆ ಆಗುವ ವರೆಗೂ ಪರೀಕ್ಷಾ ಕೊಠಡಿಯನ್ನು ಬಿಡಲು ಯಾವ ದಿವಸದಲ್ಲಿಯಾಗಲಿ ಯಾವ ವಿದ್ಯಾರ್ಥಿಗೂ ಅಪ್ಪಣೆ ಕೊಡಲ್ಪಡುವದಿಲ್ಲವು. ಮತ್ತು ಅಂಥಾ ಅರ್ಧ ಘಂಟೆ ಕಳದ ಮೇಲೆ ಬರುವ ಯಾವ ವಿದ್ಯಾರ್ಥಿಗಳಿಗೂ ಪ್ರವೇಶಕ್ಕೆ ಅವಕಾಶ ಹುಟ್ಟಲಾರದು.

(2) ಪರೀಕ್ಷೆ ಆಗುತ್ತಿರುವ ಕಾಲದಲ್ಲಿ ಪರೀಕ್ಷಾ ಕೊಠಡಿಯನ್ನು ಬಂದಾವರ್ತಿ ಬಿಟ್ಟುಬಂದನಂತರ ಪುನಹ ಪ್ರವೇಶಿಸಲು ಯಾವ ವಿದ್ಯಾರ್ಥಿಗೂ ಅವಕಾಶ ಉಂಟಾಗಲಾರದು. ಅಲ್ಲದ ತನ್ನ ಉತ್ತರ ಕಾಗದಗಳನ್ನು ಸಂಪೂರ್ತಿಯಾಗಿ ಕೊಟ್ಟವಿನಹ ಪರೀಕ್ಷಾ ಸ್ಥಳವನ್ನು ಬಿಟ್ಟುಬರುವದಕ್ಕೆ ಸಹ ಅವಕಾಶ ಕೊಡುವದಿಲ್ಲವು.

(3) ಯಾವ ವಿದ್ಯಾರ್ಥಿಯೇ ಆಗಲಿ ಮತ್ತೊಬ್ಬ ವಿದ್ಯಾರ್ಥಿಯೊಡನೆ ಮಾತನಾಡುತ್ತಲಿದ್ದದ್ದಾಗಿಯಾಗಲಿ ಅಥವಾ ಇನ್ಯಾವ ವಿಧದಿಂದಲಾದರೂ ಬಳಸುತ್ತಿರುವದಾಗಿಯಾಗಲಿ ಕಂಡುಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೂಡ್ಲೆ ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವದಲ್ಲದೆ ಸದರೀ ಸಂಗತಿಯು ಇನ್ಸ್ಪೆಕ್ಟರ್ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವದು.

(4) ಪರೀಕ್ಷಾ ಕೊಠಡಿಯೊಳಕ್ಕೆ ಸ್ಲೇಟುಗಳನ್ನಾಗಲಿ, ರೂಲರುಗಳನ್ನಾಗಲಿ, ಪುಸ್ತಕಗಳನ್ನಾಗಲಿ, ಬರದ ಕಾಗದಗಳನ್ನಾಗಲಿ, ಅಥವಾ ಇನ್ಯಾವ ವಿಧವಾದ ಕಾಗದ ಪತ್ರವನ್ನಾಗಲಿ, ತೆಗೆದುಕೊಂಡು ಹೋಗಲು ಯಾವ ವಿದ್ಯಾರ್ಥಿಗಳಿಗೂ ಯಾವ ಸಂದರ್ಭದಲ್ಲಿಯೂ ಅವಕಾಶ ಕೊಡುವದಿಲ್ಲವು. ಯಾವ ವಿದ್ಯಾರ್ಥಿಯಾಗಲಿ, ಈ ನಿಬಂಧನೆಗೆ ವಿರುದ್ಧವಾಗಿ ಆಚರಿಸುತ್ತಿರುವದಾಗಿಯಾಗಲಿ ಅಥವಾ ಇನ್ಯಾವ ಅಕೃತ್ಯಗಳನ್ನು ನಡಿಸುತ್ತಿರುವದಾಗಿಯಾಗಲಿ ಕಂಡುಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವದಲ್ಲದೆ ಸದರೀ ನಡವಳಿಕೆಯನ್ನು ಇನ್ಸ್ಪೆಕ್ಟರ್ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವದು.

420

(5) ವಿದ್ಯಾರ್ಥಿಯು ತನ್ನ ಪತ್ರವನ್ನು ಪೂರೈಸಿದ ಮೇಲೆ ತನ್ನ ಸ್ಥಳದಲ್ಲಿಯೇ ಇದ್ದು ನಿಂತು ಸೂಪರಿಂಟೆಂಡೆಂಟರು ಕಾಗದಗಳನ್ನು ತೆಗದುಕೊಳ್ಳುವ ವರೆಗೂ ಹೊಗೆಯೇ ನಿಂತಿರತಕ್ಕದ್ದು. ಯಾವದನ್ನಾದರೂ ಕೇಳಲಪೇಕ್ಷಿಸುವ ಯಾವ ವಿದ್ಯಾರ್ಥಿಯೇ ಆಗಲಿ ಮೇಲೆ ಹೇಳಿದ ರೀತಿ ನಡೆಸತಕ್ಕದ್ದೇ ಹೊರ್ತು ತನ್ನ ಸ್ಥಳವನ್ನು ಸರ್ವಥಾ ಬಿಡಕೂಡದು.

(6) ವಿದ್ಯಾರ್ಥಿಯು ಹೆಸರು, ರಿಜಿಸ್ಟರ್ ನಂಬರಿ ಇವುಗಳನ್ನು ಬರೆಯದೇ ಕಳುಹಿಸಲ್ಪಟ್ಟ ಯಾವ ಪತ್ರಿಕೆಯೂ ಪರೀಕ್ಷಿಸಲ್ಪಡುವದಿಲ್ಲವು.

(7) ಪ್ರಶ್ನೆ ಪತ್ರಗಳು ವಿನಹ ಯಾವ ಕಾಗದಗಳನ್ನಾಗಲಿ ಪರೀಕ್ಷಾ ಕೊಠಡಿಯಿಂದ ಹೊರಗೆ ತೆಗದುಕೊಂಡು ಹೋಗಲು ವಿದ್ಯಾರ್ಥಿಗಳಿಗೆ ಅಪ್ಪಣೆ ಕೊಡುವದಿಲ್ಲವು.

(8) ವಿದ್ಯಾರ್ಥಿಗಳು ಕಾಗದಗಳನ್ನು ಹರಿಯುವಂತೆಯೂ ಮತ್ತು ನೆಲದ ಮೇಲೆ ಕಾಗದಗಳನ್ನು ಬಿಸಾಡದಂತೆಯೂ ನಿಷೇಧಿಸಲ್ಪಟ್ಟಿರುತ್ತಾರೆ. ಕೆಟ್ಟುಹೋದ ವಿಷಯ್ಯ ಕಾಗದಗಳೂ ವಿದ್ಯಾರ್ಥಿಯು ಬರೆಯುತ್ತಲಿದ್ದ ಮೇಜಿನಮೇಲೆಯೇ ಬಿಡಲ್ಪಡಬೇಕು.

ಎಚ್. ಜೆ. ಭಾಭಾ,
ಇನ್‌ಸ್ಪೆಕ್ಟರ್ ಜನರಲ್ ಆಫ್ ಎಜ್ಯುಕೇಷನ್.

ಫಾರೆಸ್ಟ್ ಇಲಾಖೆ.

ಸಂದಲ್ ಹರಾಜು ನೋಟಿಫಿಕೇಷನ್.

ತಾರೀಖು 18ನೆ ಆಗಸ್ಟು 1904ನೆ ಇಸವಿ.

ಇದರಿಂದ ಸಮಸ್ತ ಜನರಿಗು ತಿಳಿಯಪಡಿಸುವದೇನಂದರೆ :—ಮೈಸೂರು ಸರಕಾರದ ಶ್ರೀರಂಗಪಟ್ಟಣ ನಡಿಯತಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಅದರದರ ಬಾಜೂದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಆಫಿಸರು ಮತ್ತು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವದು :—

ಡಿಸ್ಟ್ರಿಕ್ಟ್.	ಕೋಠಿ.	ಹರಾಜು ತಾರೀಖು.			ಸೇರಿರುವ ಟನ್‌ಗಳು ಜಿಲ್ಲೆಯ ಸ್ಥಳ	ಷರಾ.
ಮೈಸೂರು ...	ಹುಣಸೂರು ...	1904ನೆ ಇಸವಿ ನವಂಬರ್	ತಾರೀಖು	19	500	
ಡಿಟೋ	ಶ್ರೀರಂಗಪಟ್ಣ	ಡಿಟೋ	ಡಿಟೋ	23	240	
ಬೆಂಗಳೂರು ...	ಬೆಂಗಳೂರು ..	ಡಿಟೋ	ಡಿಟೋ	26	120	ಕೋಲಾರ್ ಮತ್ತು ತುಮಕೂರು ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.
ಹಾಸನ ...	ಹಾಸನ ..	1904ನೆ ಇಸವಿ ಡಿಸೆಂಬರ್	ತಾರೀಖು	1	200	
ಕಡೂರು ..	ಚಿಕ್ಕಮಗಳೂರು ..	ಡಿಟೋ	ಡಿಟೋ	5	200	
ಡಿಟೋ ..	ತರೀಕೆರೆ ..	ಡಿಟೋ	ಡಿಟೋ	8	250	
ಶಿವಮೊಗ್ಗ ...	ಶಿವಮೊಗ್ಗ ...	ಡಿಟೋ	ಡಿಟೋ	12	440	ಕಡೂರು ಮತ್ತು ಚಿತ್ರದುರ್ಗ ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.
ಡಿಟೋ ..	ಸಾಗರ ..	ಡಿಟೋ	ಡಿಟೋ	15	175	
ಡಿಟೋ ..	ತೀರ್ಥಹಳ್ಳಿ ..	ಡಿಟೋ	ಡಿಟೋ	19	175	ಕಡೂರು ಡಿಸ್ಟ್ರಿಕ್ಟ್ ಸಂದಲ್ ಕೇರಿರುತ್ತೆ.

2. ಪ್ರತಿಯಂದು ಕೋಠಿಯಲ್ಲಿಯು ಹರಾಜು ಮಾಡಲ್ಪಡುವ ಸಂದಲ್ ಲಾಟು ಮತ್ತು ಮೊತ್ತ ವಗೈರೆ ತಪಶೀಲು ಐಯಿಂದ ಇದೇ ಸಾಲ್ ಅಕ್ಟೋಬರು ಆಖೈರು ಪಳಗಾಗಿ ಘೋಷಿಸು ಮಾಡಲ್ಪಡುತ್ತದೆ.

ಎಂ. ಮುತ್ತಂಣ್ಣ,
ಕಂಸರ್ವೇಟರ್ ಆಫ್ ಫಾರೆಸ್ಟ್ಸ್ ಇನ್ ಮೈಸೂರು.